ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿನಾಲ್ಕನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 20ನೇ ಡಿಸೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:-

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಮತ್ತು ಎರಡನೇ ಪಟ್ಟಿ ರೀತ್ಯಾ

4. ವರದಿಯನ್ನೊಪ್ಪಿಸುವುದು

ಶ್ರೀ **ಎಂ.ಪಿ. ಕುಮಾರಸ್ವಾಮಿ** (ಅಧ್ಯಕ್ಷರು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ) ಅವರು ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2021-22ನೇ ಸಾಲಿನ ಆರನೇ ವರದಿಯನ್ನೊಪ್ಪಿಸುವುದು.

... 2/ ..

5. ಶಾಸನ ರಚನೆ

I. ವಿಧೇಯಕಗಳನ್ನು ಮಂಡಿಸುವುದು

1. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. **ಶ್ರೀ ಮುರುಗೇಶ ರುದ್ರಪ್ಪ ನಿರಾಣಿ (ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ವಿಶೇಷ ಹೂಡಿಕೆ ಪ್ರದೇಶ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. **ಶ್ರೀ ವಿ. ಸುನಿಲ್ ಕುಮಾರ್ (ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕವನ್ನು ಹಿಂಪಡೆಯುವುದು

ಶ್ರೀ ಆರಗ ಜ್ಞಾನೇಂದ್ರ (ಮಾನ್ಯ ಗೃಹ ಸಚಿವರು) ಅವರು:–

ಅ) 2021ನೇ ಸಾಲಿನ ಬಂದಿಗಳ ಗುರುತಿಸುವಿಕೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಹಿಂಪಡೆಯುವುದು.

... 3/ ..

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಕಿತ್ತೂರು ತಾಲ್ಲೂಕಿನಲ್ಲಿ ಈಜುಕೊಳ, ಒಳಾಂಗಣ ಮತ್ತು ಹೊರಾಂಗಣ ಕ್ರೀಡಾಂಗಣಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಗಮನ ಸೆಳೆಯುವುದು.

2) **ಶ್ರೀ ರಾಜೇಗೌಡ ಟಿ.ಡಿ. ಅವರು** – ಮೂಲ ಗೇಣಿದಾರರು, ಕುಮ್ಕಿ ಜಮೀನು, ಖಾನೆ, ಬಾನೇ, ಡೀಮ್ಡ್ ಅರಣ್ಯ ಸಾಗುವಳಿದಾರರ ಸಮಸ್ಯೆಗಳ ಕುರಿತು ಅಧ್ಯಯನ ನಡೆಸಲು ರಚಿಸಿರುವ ಸಮಿತಿಯು ಕೈಗೊಂಡಿರುವ ನಿರ್ಣಯಗಳ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ಎಸ್. ಕುಮಾರ್ ಬಂಗಾರಪ್ಪ ಅವರು** – ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು 'ಬಿ' ವೃಂದದ ಅಧಿಕಾರಿಗಳ ಹುದ್ದೆಗೆ ಮೇಲ್ದರ್ಜೆಗೇರಿಸಿರುವುದರಿಂದ ಉದ್ಭವಿಸಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀ ಅಭಯ ಪಾಟೀಲ ಅವರು** – ರಾಜ್ಯದಲ್ಲಿನ ನಗರ ಪ್ರದೇಶಗಳಲ್ಲಿ ಬಡ ಕೂಲಿ ಕಾರ್ಮಿಕರು ಹಾಗೂ ನೇಕಾರರು ಬಿನ್‌ಶೇತ್ಕಿ ಆಗಿರದ ಹಾಗೂ ಬಿನ್‌ಶೇತ್ಕಿ ಆಗಿರುವ ಕೃಷಿ ಜಮೀನುಗಳಲ್ಲಿ ಮನೆ ನಿರ್ಮಿಸಿಕೊಂಡು ವಾಸವಾಗಿರುವ ಪ್ರಕರಣಗಳನ್ನು ಸಕ್ರಮಗೊಳಿಸಿ, ಅವರುಗಳಿಗೆ ಮೂಲ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ಬಸನಗೌಡ ದದ್ದಲ ಅವರು** – ರಾಯಚೂರು ಜಿಲ್ಲೆಗೆ ಏಮ್ಸ್ ಸಂಸ್ಥೆಯನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

6) **ಡಾ: ದೇವಾನಂದ ಫುಲಸಿಂಗ್ ಚವ್ಹಾಣ್ ಅವರು** – ನಾಗಠಾಣ ಮತಕ್ಷೇತ್ರದ ಚಡಚಣ ತಾಲ್ಲೂಕಿನ ಬರಡೋಲ ಗ್ರಾಮದ ಹೊರವಲಯದಲ್ಲಿ ವಾಸವಾಗಿರುವ ದುರುಮುರಗಿ ಕಾಲೋನಿಗೆ ಸಂಪರ್ಕಿಸುವ ರಸ್ತೆಯನ್ನು ಸಾರ್ವಜನಿಕರು ಅತಿಕ್ರಮಿಸಿಕೊಂಡಿರುವುದರಿಂದ ಆಗಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7) **ಶ್ರೀ ಕೆ.ವೈ. ನಂಜೇಗೌಡ ಅವರು** – ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯ ಹಳೆ ಕಟ್ಟಡವನ್ನು ನೆಲಸಮಗೊಳಿಸಿ ಸುಸಜ್ಜಿತ ಹೊಸ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಸಚಿವರ ಗಮನ ಸೆಳೆಯುವುದು.

8) **ಡಾ. ಹೆಚ್.ಡಿ. ರಂಗನಾಥ್ ಅವರು** – ಕುಣಿಗಲ್ ತಾಲ್ಲೂಕಿನ ಮಧ್ಯಭಾಗದಲ್ಲಿರುವ ಸ್ಟಡ್ ಫಾರಂನಲ್ಲಿ ಕೆಲಸ ಮಾಡುತ್ತಿರುವ 150 ಮಂದಿ ಖಾಯಂ ನೌಕರರು ಹಾಗೂ 100 ಮಂದಿ ಗುತ್ತಿಗೆ ನೌಕರರುಗಳಿಗೆ ಸಂಬಳವನ್ನು ನೀಡುವುದರ ಬಗ್ಗೆ ಹಾಗೂ ಸ್ಟಡ್ ಫಾರಂನ 400 ಎಕರೆ ವಿಸ್ತೀರ್ಣದ ಜಾಗವನ್ನು ಉಪಯೋಗಿಸುವ ಬಗ್ಗೆ ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

9) **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಸಾ.ರಾ. ಮಹೇಶ್ ಹಾಗೂ ಎಂ. ಅಶ್ವಿನ್ ಕುಮಾರ್ ಅವರುಗಳು** – ಇತ್ತೀಚೆಗೆ ಕೊಬ್ಬರಿ ಬೆಲೆಯ ಕುಸಿತದಿಂದಾಗಿ ತೆಂಗು ಬೆಳೆಗಾರರು ಆರ್ಥಿಕ ಸಂಕಷ್ಟಕ್ಕೆ ಈಡಾಗಿರುವುದರಿಂದ ಕೊಬ್ಬರಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಹಾಗೂ ಸಹಾಯಧನವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

10) **ಶ್ರೀ ಕೆ.ಎಸ್. ಲಿಂಗೇಶ್ ಅವರು** – ಬೇಲೂರು ವಿಧಾನಸಭಾ ಕ್ಷೇತ್ರದಲ್ಲಿ ಕುಸಿದಿರುವ ದೊಡ್ಡಕೋಡಿಹಳ್ಳಿ ಕೆರೆಯ ಏರಿ ಭಾಗವನ್ನು ದುರಸ್ತಿಗೊಳಿಸಲು ತಕ್ಷಣ ತಾತ್ಕಾಲಿಕ ಕ್ರಮ ಕೈಗೊಳ್ಳುವ ಬಗ್ಗೆ ಹಾಗೂ ಈಗಾಗಲೇ ಕುಸಿದಿರುವ ಇತರೆ ಕೆರೆಗಳ ಏರಿ ಭಾಗಗಳಿಗೆ ಸಂಬಂಧಿಸಿದಂತೆ ಶಾಶ್ವತ ಕಾಮಗಾರಿ ಕೈಗೊಳ್ಳುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm